ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು).—

ಅ) ಕೇಂದ್ರ ಸರ್ಕಾರದ ಯೋಜನಾ ಆಯೋಗದ ಮಾರ್ಗಸೂಚಿ ಅನ್ವಯ ಪಶ್ಚಿಮ ಘಟ್ಟಗಳ ಪರಿಸರ, ಸಂರಕ್ಷಣೆಗೆ ಹಾಗೂ ಅಭಿವೃದ್ಧಿಗಾಗಿ, ಕೃಷಿ ಮತ್ತು ಭೂ ಸಾರ ಸಂರಕ್ಷಣೆ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಕ್ಷೀರ ಅಭಿವೃದ್ಧಿ, ಅರಣ್ಯ ಮೀನುಗಾರಿಕೆ ಇತ್ಯಾದಿ ಅಭಿವೃದ್ಧಿ, ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ಆ) ಈ ಕಾರ್ಯಕ್ರಮಕ್ಕಾಗಿ ೧೯೯೦-೯೧ರ ಸಾಲಿನಲ್ಲಿ ೮೮೯ ಲಕ್ಷ ರೂ. ಗಳನ್ನು ನಿಗದಿ ಗೊಳಿಸಿರುತ್ತದೆ.

ಇ) ಮೇಲಿನಂತೆ.

ಈ) ಯೋಜನಾ ಆಯೋಗವು ೧೯೯೦-೯೧ನೇ ಸಾಲಿಗೆ ೮೮೯ ಲಕ್ಷ ರೂ. ಗಳಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುತ್ತದೆ. ಈ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರವು ಶೇಕಡಾ ೧೦೦ರಷ್ಟು ಅನುದಾನವನ್ನು ನೀಡುತ್ತದೆ.

ಚಿತ್ರದುರ್ಗ ಜಿಲ್ಲೆಗೆ ಮಂಜೂರಾದ ವೈದ್ಯರ ಹುದ್ದೆಗಳ ಸಂಖ್ಯೆ

೮೪೯(ಗಿಖಿಟಿ) ಶ್ರೀ ಎಸ್. ಜಿ. ನಾಯಕ್ (ಮೊಳಕಾಲ್ಮೂರು).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಚಿತ್ರದುರ್ಗ ಜಿಲ್ಲೆಗೆ ಮಂಜೂರಾತಿ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಅವುಗಳಲ್ಲಿ ಭರ್ತಿಮಾಡಿದ ವೈದ್ಯರ ಹುದ್ದೆಗಳು ಎಷ್ಟು?

ಇ) ಉಳಿದ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣ ಏನು?

ಈ) ಮೊಳಕಾಲ್ಮೂರು ಕ್ಷೇತ್ರದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು?

ಉ) ಇವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ೨೧೫.

ಆ) ೨೦೫.

ಇ) ವೈದ್ಯರ ಕೊರತೆ ಇರುವುದರಿಂದ.

ಈ) ಎರಡು.

ಉ) ಆದಷ್ಟು ಬೇಗ ಭರ್ತಿ ಮಾಡಲಾಗುವುದು.

ಚಿತ್ರದುರ್ಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಕೆಲಸ ಮಾಡುವ ಸರ್ಕಾರಿ ವೈದ್ಯರಿಗೆ ಹಾಗೂ ಇತರ ಸಿಬ್ಬಂದಿಗಳಿಗೆ ವಿಶೇಷ ಭತ್ಯೆ ನೀಡುವ ಬಗ್ಗೆ

೮೫೦(ಗಿಖಿಳಿ) ಶ್ರೀ ಎಸ್. ಜಿ. ನಾಯಕ್ (ಮೊಳಕಾಲ್ಮೂರು).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಚಿತ್ರದುರ್ಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ಸರ್ಕಾರಿ ವೈದ್ಯರ ಹಾಗೂ ಇತರ ವೈದ್ಯಕೀಯ ವರ್ಗಕ್ಕೆ ಸೇರಿದವರ ಸಂಖ್ಯೆ ಎಷ್ಟು?

ಆ) ಅವರುಗಳಿಗೆ ವಿಶೇಷ ಭತ್ಯೆ ಕೊಡುವ ಯೋಜನೆ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ವಿವರಗಳನ್ನು ಒದಗಿಸುವುದು.